All India Radio: Bangalore
National Bulletin In Kannada
28.10.2025 19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
< > < > < > < >
ಮುಖ್ಯಾಂಶಗಳು

೧. ಕೇಂದ್ರದ ೮ನೇ ವೇತನ ಆಯೋಗದ ಉಲ್ಲೇಖಿತ ನಿಯಮಗಳಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ

೨. ಸೌರಶಕ್ತಿ ಉತ್ಪಾದನೆಯಲ್ಲಿ ಭಾರತ, ಜಾಗತಿಕವಾಗಿ ಮೂರನೇ ಸ್ಥಾನದಲ್ಲಿದೆ- ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ

೩. ಎಚ್‌ಎಎಲ್‌ನಿಂದ ಇನ್ನು ಭಾರತದಲ್ಲೇ ಎಸ್‌ಜೆ-೧೦೦ ನಾಗರಿಕ ವಿಮಾನಗಳ ಉತ್ಪಾದನೆ

೪. ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣದಲ್ಲಿ ೮೦ ಲಕ್ಷ ಟನ್‌ಗಳಿಗೂ ಹೆಚ್ಚು ತ್ಯಾಜ್ಯ ವಸ್ತುಗಳ ಬಳಕೆ - ಕೇಂದ್ರ ಸಚಿವ ನಿತಿನ್ ಗಡ್ಕರಿ

><><><><><

ಕೇಂದ್ರದ ೮ನೇ ವೇತನ ಆಯೋಗದ ಉಲ್ಲೇಖಿತ ನಿಯಮಗಳನ್ನು ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಅನುಮೋದಿಸಿದೆ. ನವದೆಹಲಿಯಲ್ಲಿ ಇಂದು ನಡೆದ ಸಚಿವ ಸಂಪುಟ ಸಭೆಯ ನಂತರ ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಆಯೋಗ ರಚನೆಯಾದ ದಿನಾಂಕದಿಂದ ೧೮ ತಿಂಗಳೊಳಗೆ ತನ್ನ ಶಿಫಾರಸುಗಳನ್ನು ಮಾಡುತ್ತದೆ. ಆಯೋಗವು ಒಬ್ಬ ಅಧ್ಯಕ್ಷ, ಒಬ್ಬ ಅರೆಕಾಲಿಕ ಸದಸ್ಯ ಮತ್ತು ಒಬ್ಬ ಸದಸ್ಯ ಕಾರ್ಯದರ್ಶಿಯನ್ನು ಒಳಗೊಂಡಿರುತ್ತದೆ ಎಂದು ತಿಳಿಸಿದರು. ೨೦೨೫-೨೬ ರ ಹಿಂಗಾರು ಋತುವಿನಲ್ಲಿ ಫಾಸ್ಫೇಟ್ ಮತ್ತು ಪೊಟ್ಯಾಸಿಕ್ ರಸಗೊಬ್ಬರಗಳ ಮೇಲಿನ ಪೌಷ್ಟಿಕಾಂಶ ಆಧಾರಿತ ಸಬ್ಸಿಡಿ ದರಗಳನ್ನು ಸಹ ಸಂಪುಟ ಅನುಮೋದಿಸಿದೆ. ೨೦೨೫ ರ ಹಿಂಗಾರಿಗೆ ಸುಮಾರು ೩೭ ಸಾವಿರದ ೯೫೨ ಕೋಟಿ ರೂಪಾಯಿಗಳ ಸಬ್ಸಿಡಿಯನ್ನು ಸಚಿವ ಸಂಪುಟ ಅನುಮೋದಿಸಿದೆ ಮತ್ತು ದರಗಳು ಅಕ್ಟೋಬರ್ ೧ ರಿಂದ ಅನ್ವಯವಾಗುತ್ತವೆ ಎಂದು ಅವರು ಮಾಹಿತಿ ನೀಡಿದರು. ಈ ಉಪಕ್ರಮವು ರೈತರಿಗೆ ಸಬ್ಸಿಡಿ, ಕೈಗೆಟುಕುವ ಮತ್ತು ಸಮಂಜಸ ಬೆಲೆಯಲ್ಲಿ ರಸಗೊಬ್ಬರಗಳ ಲಭ್ಯತೆಯನ್ನು ಖಚಿತಪಡಿಸುತ್ತದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ರಸಗೊಬ್ಬರಗಳ ಬೆಲೆಗಳು ಮತ್ತು ಅವುಗಳ ಒಳಹರಿವಿನಲ್ಲಿನ ಇತ್ತೀಚಿನ ಪ್ರವೃತ್ತಿಗಳನ್ನು ಗಮನದಲ್ಲಿಟ್ಟುಕೊಂಡು ಫಾಸ್ಫೇಟ್ ಮತ್ತು ಪೊಟ್ಯಾಸಿಕ್ ರಸಗೊಬ್ಬರಗಳ ಮೇಲಿನ ಸಬ್ಸಿಡಿಯನ್ನು ತರ್ಕಬದ್ಧಗೊಳಿಸಲಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

ಧ್ವನಿ: ಅಶ್ವಿನಿ ವೈಷ್ಣವ್, (೩೬ ಸೇಕೆಂಡ್)

><><><><><

ಸೌರಶಕ್ತಿ ಉತ್ಪಾದನೆಯಲ್ಲಿ ಭಾರತ, ಜಾಗತಿಕವಾಗಿ ಮೂರನೇ ಸ್ಥಾನದಲ್ಲಿದ್ದು, ಸ್ಥಾಪಿತ ಸಾಮರ್ಥ್ಯದ ೫೦ ಪ್ರತಿಶತವನ್ನು ಸಾಧಿಸಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ ಅಂತಾರಾಷ್ಟ್ರೀಯ ಸೌರ ಒಕ್ಕೂಟ ಸಭೆಯ ಎಂಟನೇ ಅಧಿವೇಶನದಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಸಚಿವರು, ಭಾರತವು ತನ್ನ ಪಳೆಯುಳಿಕೆ ಇಂಧನ ಆಮದು ಮತ್ತು ಮಾಲಿನ್ಯ-ಸಂಬಂಧಿತ ವೆಚ್ಚಗಳನ್ನು ಕಡಿಮೆ ಮಾಡಿದೆ. ಇದು ಶುದ್ಧ ಶಕ್ತಿಯ ಆರ್ಥಿಕ ಪ್ರಯೋಜನಗಳನ್ನು ಪ್ರದರ್ಶಿಸುತ್ತದೆ ಎಂದರು. ಜಾಗತಿಕ ಸಾಮರ್ಥ್ಯದ ಸುಮಾರು ಶೇಕಡಾ ೪೧ ರಷ್ಟು ಸದಸ್ಯ ರಾಷ್ಟ್ರಗಳಿಂದ ನಿರ್ವಹಿಸಲ್ಪಡುತ್ತದೆ. ಇದು ಮೈತ್ರಿಕೂಟದ ಪರಿಣಾಮವನ್ನು ತೋರಿಸುತ್ತದೆ. ಸೌರಶಕ್ತಿಯನ್ನು ನ್ಯಾಯಯುತ, ಕೈಗೆಟುಕುವ ಮತ್ತು ಸುಸ್ಥಿರವಾಗಿಸುವತ್ತ ಐಎಸ್ಎ ಕೆಲಸ ಮಾಡುತ್ತಿದೆ ಎಂದು ಸಚಿವ ಪ್ರಹ್ಲಾದ್ ಜೋಶಿ ಹೇಳಿದರು.

><><><><><

ಇಡೀ ಜಗತ್ತಿನ ಮೇಲೆ ಪರಿಣಾಮ ಬೀರುತ್ತಿರುವ ಹವಾಮಾನ ಬದಲಾವಣೆಯನ್ನು ಎದುರಿಸಲು ದೃಢವಾದ ಕ್ರಮವಹಿಸುವ ಅಗತ್ಯವಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯ ಭಾರತ್ ಮಂಟಪದಲ್ಲಿಂದು ಅಂತಾರಾಷ್ಟ್ರೀಯ ಸೌರ ಒಕ್ಕೂಟ - ಐಎಸ್ಎ ಸಭೆಯ ೮ನೇ ಅಧಿವೇಶನದಲ್ಲಿ ಮುಖ್ಯ ಭಾಷಣ ಮಾಡಿದ ರಾಷ್ಟ್ರಪತಿ ಜಾಗತಿಕ ಹವಾಮಾನ ಬದಲಾವಣೆ ವಿರುದ್ಧ ಕ್ರಮವಹಿಸಲು ಭಾರತ ಬದ್ಧವಾಗಿದೆ. ಭಾರತ ಹಾಗೂ ಜಗತ್ತಿನಾದ್ಯಂತದ ನಾಗರಿಕತೆಗಳು ಸೂರ್ಯನನ್ನು ಜೀವ ಮತ್ತು ಶಕ್ತಿಯ ಮೂಲವೆಂದು ಪರಿಗಣಿಸುತ್ತವೆ ಎಂದರು. ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಹ್ಲಾದ್ ಜೋಶಿ, ಐಎಸ್ಎ ಒಕ್ಕೂಟದ ಮಹಾ ನಿರ್ದೇಶಕ ಆಶಿಶ್ ಖನ್ನಾ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ನಾಲ್ಕು ದಿನಗಳ ಈ ಜಾಗತಿಕ ಕಾರ್ಯಕ್ರಮದಲ್ಲಿ ೧೨೪ ರಾಷ್ಟ್ರಗಳು ಮತ್ತು ಜಗತ್ತಿನಾದ್ಯಂತದ ೪೦ಕ್ಕೂ ಹೆಚ್ಚು ಸಚಿವರು ಭಾಗವಹಿಸಿದ್ದಾರೆ. ಈ ಕಾರ್ಯಕ್ರಮ ಸಹಕಾರವನ್ನು ಬಲಪಡಿಸಲು ಹಾಗೂ ಉಜ್ವಲ ಮತ್ತು ಸುಸ್ಥಿರ ಭವಿಷ್ಯಕ್ಕಾಗಿ ಸೌರಶಕ್ತಿ ಅಳವಡಿಕೆಯನ್ನು ವೇಗಗೊಳಿಸಲು ಜಾಗತಿಕ ಸಮುದಾಯವನ್ನು ಒಟ್ಟುಗೂಡಿಸಿದೆ.

><><><><><

೨೦೪೭ ರಲ್ಲಿ ಭಾರತವನ್ನು ವಿಕಸಿತ ಭಾರತವನ್ನಾಗಿ ಮಾಡಲು ನಾಗರಿಕರು ಶ್ರಮಿಸಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ತಮಿಳುನಾಡಿನಲ್ಲಿಂದು ಕೊಯಮತ್ತೂರು ನಾಗರಿಕರ ವೇದಿಕೆಯಲ್ಲಿ ಮಾತನಾಡಿದ ಅವರು, ಕೈಗಾರಿಕೆಯಲ್ಲಿನ ಕಾರ್ಮಿಕರು ಮತ್ತು ಕೃಷಿಯಲ್ಲಿನ ರೈತರು ದೇಶದ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಬೆನ್ನೆಲುಬಾಗಿದ್ದಾರೆ ಎಂದರು. ಆಧುನೀಕರಣ, ಕಾರ್ಮಿಕರ ಕೆಲಸವನ್ನು ಕಿತ್ತುಕೊಳ್ಳುವುದಿಲ್ಲ. ಬದಲಾಗಿ ಕೈಗಾರಿಕಾ ವಲಯದ ಬೆಳವಣಿಗೆಗೆ ಕಾರಣವಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದರು.

><><><><><

ಭಾರತದಲ್ಲಿ ಎಸ್‌ಜೆ-೧೦೦ ನಾಗರಿಕ ವಿಮಾನಗಳ ಉತ್ಪಾದನೆಗಾಗಿ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್, ರಷ್ಯಾದ ಯುನೈಟೆಡ್ ಏರ್‌ಕ್ರಾಫ್ಟ್ ಕಾರ್ಪೊರೇಷನ್ ಜೊತೆ ಒಪ್ಪಂದಕ್ಕೆ ಸಹಿ ಹಾಕಿದೆ. ಉಡಾನ್ ಯೋಜನೆಯಡಿಯಲ್ಲಿ ಅಲ್ಪ-ದೂರದ ಸಂಪರ್ಕಕ್ಕೆ ಎಸ್‌ಜೆ-೧೦೦ ಒಂದು ಪ್ರಮುಖ ಬದಲಾವಣೆ ತರಲಿದೆ ಮತ್ತು ನಾಗರಿಕ ವಿಮಾನಯಾನದಲ್ಲಿ 'ಆತ್ಮನಿರ್ಭರ ಭಾರತ'ವನ್ನು ಸಾಧಿಸುವತ್ತ

ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದರು. ಎಸ್‌ಜೆ-೧೦೦ ದೇಶದಲ್ಲಿ ತಯಾರಾಗುವ ಮೊದಲ ಸಂಪೂರ್ಣ ಪ್ರಯಾಣಿಕ ವಿಮಾನವಾಗಲಿದೆ. ವಿಮಾನಗಳ ತಯಾರಿಕೆಯು ಖಾಸಗಿ ವಲಯವನ್ನು ಬಲಪಡಿಸುತ್ತದೆ ಹಾಗೂ ವಾಯುಯಾನ ಉದ್ಯಮದಲ್ಲಿ ನೇರ ಮತ್ತು ಪರೋಕ್ಷ ಉದ್ಯೋಗಗಳನ್ನು ಸೃಷ್ಟಿಸುತ್ತದೆ ಎಂದು ಸಚಿವರು ತಿಳಿಸಿದರು.

><><><><><

ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣದಲ್ಲಿ ೮೦ ಲಕ್ಷ ಟನ್‌ಗಳಿಗೂ ಹೆಚ್ಚು ತ್ಯಾಜ್ಯ ವಸ್ತುಗಳನ್ನು ಬಳಸಲಾಗಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಮಾಹಿತಿ ನೀಡಿದ್ದಾರೆ. ನವದೆಹಲಿಯಲ್ಲಿಂದು 'ಭಾರತದಲ್ಲಿ ಸ್ಮಾರ್ಟ್ ರಸ್ತೆಗಳ ಭವಿಷ್ಯದ ಕುರಿತಾದ ಸಿಐಐ ಸಮ್ಮೇಳನ' ಉದ್ದೇಶಿಸಿ ಮಾತನಾಡಿದ ಅವರು, ಸಾರಿಗೆ ವಲಯದಲ್ಲಿ ಎಥೆನಾಲ್ ಮತ್ತು ಮೆಥನಾಲ್‌ನಂತಹ ಜೈವಿಕ ಇಂಧನಗಳ ಅಳವಡಿಕೆಯು ಲಾಜಿಸ್ಟಿಕ್ಸ್ ವೆಚ್ಚವನ್ನು ಶೇಕಡಾ ೫ ರಿಂದ ೬ ರಷ್ಟು ಕಡಿಮೆ ಮಾಡಲು ಸಹಾಯ ಮಾಡಿದೆ ಎಂದು ಹೇಳಿದರು. ಲಾಜಿಸ್ಟಿಕ್ಸ್ ವೆಚ್ಚ ಕಡಿಮೆ ಆಗುವುದರಿಂದ, ಅದು ವ್ಯಾಪಾರ ಹೆಚ್ಚಿಸುತ್ತದೆ, ತಲಾ ಆದಾಯ ಹೆಚ್ಚಿಸುತ್ತದೆ ಮತ್ತು ಆರ್ಥಿಕವಾಗಿ ದುರ್ಬಲ ವರ್ಗವನ್ನು ಬೆಂಬಲಿಸುತ್ತದೆ. ಪರ್ಯಾಯ ಜೈವಿಕ ಇಂಧನಗಳ ಬಳಕೆಯು ಸುಸ್ಥಿರತೆಯನ್ನು ಉತ್ತೇಜಿಸುತ್ತದೆ, ಮಾಲಿನ್ಯ ಕಡಿಮೆ ಮಾಡುತ್ತದೆ ಮತ್ತು ಕೃಷಿ ಉತ್ಪನ್ನಗಳಿಗೆ ಹೆಚ್ಚಿದ ಬೇಡಿಕೆಯ ಮೂಲಕ ರೈತರಿಗೆ ಪ್ರಯೋಜನವನ್ನು ನೀಡುತ್ತದೆ ಎಂದು ಅವರು ತಿಳಿಸಿದರು. ಉತ್ತಮ ಮೂಲಸೌಕರ್ಯ ದೇಶದ ಬೆನ್ನೆಲುಬಾಗಿದ್ದು, ೨೦೨೬ ರ ವೇಳೆಗೆ ೫ ಟ್ರಿಲಿಯನ್ ಆರ್ಥಿಕತೆಯ ದೃಷ್ಟಿಕೋನವನ್ನು ಸಾಧಿಸಲು ಸುಸ್ಥಿರ ರಸ್ತೆ ಅಭಿವೃದ್ಧಿಯು ಪ್ರಮುಖವಾಗಿದೆ ಎಂದು ಸಚಿವ ನಿತಿನ್ ಗಡ್ಕರಿ ಹೇಳಿದರು.

><><><><><

ಮುಂಬೈನಲ್ಲಿ ನಡೆಯುತ್ತಿರುವ ಭಾರತ ಸಾಗರ ಸಪ್ತಾಹದ ಎರಡನೇ ದಿನವಾದ ಇಂದು ಕೇಂದ್ರ ಬಂದರು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನಾವಾಲ್, ರಾಷ್ಟ್ರೀಯ ಸಾಗರ ಪರಂಪರೆ ಸಂಕೀರ್ಣದ ಲಾಂಛನವನ್ನು ಅನಾವರಣಗೊಳಿಸಿದರು. ಇದೇ ವೇಳೆ ಅವರು ಓಒಊಅ ಸಂಶೋಧನಾ ವರದಿಯನ್ನು ಬಿಡುಗಡೆ ಮಾಡಿದರು ಮತ್ತು ಸಾಗರ ಪರಂಪರೆಯ ದಿನಾಚರಣೆಯನ್ನು ಉದ್ಘಾಟಿಸಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಸಾವಿರಾರು ವರ್ಷಗಳ ಭಾರತದ ಸಮುದ್ರ ಪ್ರಯಾಣವು ಕೇವಲ ಭಾರತದ ಕಥೆಯಲ್ಲ. ಬದಲಾಗಿ ಎಲ್ಲಾ ಖಂಡಗಳ ನಡುವಿನ ಪರಸ್ಪರ ಗೌರವ ಮತ್ತು ಪಾಲುದಾರಿಕೆಯ ಸಂಕೇತವಾಗಿದೆ ಎಂದು ಪ್ರತಿಪಾದಿಸಿದರು. ಗುಜರಾತ್‌ನ ಲೋಥಾಲ್‌ನಲ್ಲಿ ಪ್ರಸ್ತಾವಿತ ರಾಷ್ಟ್ರೀಯ ಸಾಗರ ಪರಂಪರೆ ಸಂಕೀರ್ಣವು ಅಂತಾರಾಷ್ಟ್ರೀಯ ಪ್ರವಾಸಿ ತಾಣವಾಗಲಿದೆ ಮತ್ತು ಯುವ ಪೀಳಿಗೆಗೆ ಕಡಲ ವಲಯದಲ್ಲಿ ಹೊಸತನವನ್ನು ಕಂಡುಕೊಳ್ಳಲು ಸ್ಫೂರ್ತಿ ನೀಡುತ್ತದೆ ಎಂದು ಸಚಿವ ಸರ್ಬಾನಂದ ಸೋನಾವಾಲ್ ವಿಶ್ವಾಸ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಬಂದರು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ರಾಜ್ಯ ಸಚಿವ ಶಾಂತನು ಠಾಕೂರ್, ಸಾವಿರಾರು ವರ್ಷಗಳ ಹಿಂದಿನ ಭಾರತದ ಶ್ರೀಮಂತ ಸಮುದ್ರ ಪರಂಪರೆಯನ್ನು ಸಂರಕ್ಷಿಸಲು ಸಚಿವಾಲಯ ಬದ್ಧವಾಗಿದೆ ಎಂದು ಹೇಳಿದರು.

><><><><><

ಕೈಗಾರಿಕಾ ಉತ್ಪಾದನಾ ಸೂಚ್ಯಂಕದಲ್ಲಿ ಭಾರತದ ಕೈಗಾರಿಕಾ ಉತ್ಪಾದನ ಬೆಳವಣಿಗೆ ಈ ವರ್ಷದ ಸೆಪ್ಟೆಂಬರ್‌ನಲ್ಲಿ ವಾರ್ಷಿಕ ಆಧಾರದ ಮೇಲೆ ಶೇಕಡಾ ೪ ರಷ್ಟು ಬೆಳವಣಿಗೆ ಕಂಡಿದೆ. ಪ್ರಮುಖವಾಗಿ ಉತ್ಪಾದನಾ ವಲಯ ಹೆಚ್ಚು ಬೆಳವಣಿಗೆ ದಾಖಲಿಸಿದೆ. ಏತನ್ಮಧ್ಯೆ, ಈ ವರ್ಷದ ಆಗಸ್ಟ್‌ನಲ್ಲಿ ಭಾರತದ ಕೈಗಾರಿಕಾ ಉತ್ಪಾದನಾ ಬೆಳವಣಿಗೆಯ ದರವನ್ನು ಶೇಕಡಾ ೪.೧ ಕ್ಕೆ ಪರಿಷ್ಕರಿಸಲಾಗಿದೆ.

><><><><><

ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಪ್ರದೇಶ-ನಿರ್ದಿಷ್ಟ ಉಪಕ್ರಮಗಳು ಮತ್ತು ಕಡಲ ಸಾಮರ್ಥ್ಯ ಹೆಚ್ಚಳದ ಅಗತ್ಯವನ್ನು ಭಾರತೀಯ ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ ತ್ರಿಪಾಠಿ ಒತ್ತಿ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಇಂಡೋ-ಪೆಸಿಫಿಕ್ ಪ್ರಾದೇಶಿಕ ಸಂವಾದ ಉದ್ದೇಶಿಸಿ ಮಾತನಾಡಿದ ಅವರು, ಕಡಲ ಕ್ಷೇತ್ರದಲ್ಲಿ ಸಾಮರ್ಥ್ಯ ವೃದ್ಧಿಯು ಸ್ಪಷ್ಟವಾಗಿರಬೇಕು. ಇದು ಒಂದು ರಾಷ್ಟ್ರವು ಸಮುದ್ರ ವಲಯದಲ್ಲಿ ಪ್ರಸ್ತುತ ಮತ್ತು ನಿರಂತರವಾಗಿ ಉಳಿಯುವ ಸಾಮರ್ಥ್ಯವನ್ನು ಬಲಪಡಿಸುತ್ತದೆ ಎಂದರು.  ೩೦ ದೇಶಗಳ ಪ್ರತಿನಿಧಿಗಳು ಕಡಲ ಕಾರ್ಯತಂತ್ರ, ರಾಜತಾಂತ್ರಿಕತೆ ಮತ್ತು ಸಹಕಾರದ ಕುರಿತಾದ ದೇಶದ ಪ್ರಮುಖ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸುತ್ತಿದ್ದಾರೆ. ಭಾರತೀಯ ನೌಕಾಪಡೆಯು ಗುಪ್ತಚರ ಮತ್ತು ಮಾಹಿತಿ ವಿನಿಮಯವನ್ನು ಸುಗಮಗೊಳಿಸಲು ನಿಶಾರ್ ಮಿತ್ರ ಟರ್ಮಿನಲ್‌ಗಳನ್ನು ಅಭಿವೃದ್ಧಿಪಡಿಸಿದೆ ಎಂದು ಅವರು ಹೇಳಿದರು. ಈ ಪ್ರದೇಶದ ಪಾಲುದಾರರಲ್ಲಿ ತಡೆರಹಿತ ಸಂವಹನ ಮತ್ತು ಸಹಕಾರವನ್ನು ಸಕ್ರಿಯಗೊಳಿಸುತ್ತದೆ. ೨೦೨೮ ರ ವೇಳೆಗೆ ಭಾರತ, ಸುಮಾರು ಐವತ್ತು ಅಂತಾರಾಷ್ಟ್ರೀಯ ಸಂಪರ್ಕ ಅಧಿಕಾರಿಗಳನ್ನು ಆಯೋಜಿಸುವ ಗುರಿಯನ್ನು ಹೊಂದಿದೆ ಎಂದು ಅಡ್ಮಿರಲ್ ದಿನೇಶ್ ಕೆ ತ್ರಿಪಾಠಿ ತಿಳಿಸಿದರು.

><><><><><

ಬಂಗಾಳಕೊಲ್ಲಿಯಲ್ಲಿ 'ಮೊಂಥಾ' ಚಂಡಮಾರುತ ಬಿರುಸುಗೊಳ್ಳುತ್ತಿದೆ. ಗಾಳಿ ೯೦ ರಿಂದ ೧೦೦ ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುತ್ತಿದ್ದು, ಆಂಧ್ರಪ್ರದೇಶ ಕರಾವಳಿಯಾದ್ಯಂತ ಭಾರೀ ಮಳೆ ಸುರಿಯುತ್ತಿದೆ. ಶ್ರೀಕಾಕೂಲಂ, ವಿಶಾಖಪಟ್ಟಣಂ, ಅನಕಪಲ್ಲಿ, ಪೂರ್ವ ಗೋಧಾವರಿ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಈಗಾಗಲೇ ಭಾರೀ ಮಳೆಯ ಜೊತೆಗೆ ತೀವ್ರ ಗಾಳಿ ಬೀಸುತ್ತಿದೆ.  ಹಲವು ಜಿಲ್ಲೆಗಳಿಗೆ ಆರೆಂಜ್ ಹಾಗೂ ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ.  ಆಂಧ್ರಪ್ರದೇಶ ಸರ್ಕಾರ ದಿನದ ೨೪ ಗಂಟೆ ಕಾರ್ಯ ನಿರ್ವಹಿಸುವ ನೈಜ ಸಮಯದ ಆಡಳಿತಾತ್ಮಕ ವಾರ್ ರೂಮ್ ಅನ್ನು ಸ್ಥಾಪಿಸಿದ್ದು, ಕಟ್ಟೆಚ್ಚರ ವಹಿಸಿದೆ. ಎಲ್ಲಾ ಆಸ್ಪತ್ರೆಗಳನ್ನು ಹೈ ಅಲರ್ಟ್‌ನಲ್ಲಿಡಲಾಗಿದ್ದು, ಗರ್ಭಿಣಿ ಮಹಿಳೆಯರು ಮತ್ತು ಹಾಲುಣಿಸುವ ತಾಯಂದಿರ ಕುರಿತು ವಿಶೇಷ ಗಮನ ಹರಿಸಲಾಗಿದೆ. ಸುಮಾರು ೩೪೪ ಶಾಲೆಗಳನ್ನು ಚಂಡಮಾರುತ ಪರಿಹಾರ ಕೇಂದ್ರಗಳಾಗಿಸಲಾಗಿದೆ.  ಎಲ್ಲಾ ರೀತಿಯ ಸಮುದ್ರ ಚಟುವಟಿಕೆಗಳಿಗೆ ನಿರ್ಬಂಧ ವಿಧಿಸಲಾಗಿದೆ. ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಪರಿಸ್ಥಿತಿ ಕುರಿತು ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ಈಗಾಗಲೇ ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರೊಂದಿಗೆ ಮಾತನಾಡಿದ್ದು, ಪರಿಹಾರ ಮತ್ತು ಪುನರ್ ವಸತಿಗಾಗಿ ಸಂಪೂರ್ಣ ಬೆಂಬಲದ ಭರವಸೆ ನೀಡಿದ್ದಾರೆ.

><><><><><

ಮೊಂಥಾ ಚಂಡಮಾರುತದ ಪ್ರಭಾವವನ್ನು ಗಮನದಲ್ಲಿಟ್ಟುಕೊಂಡು, ವಿಶೇಷವಾಗಿ ಆಂಧ್ರಪ್ರದೇಶ, ಒಡಿಶಾ ಮತ್ತು ತೆಲಂಗಾಣದ ಪೂರ್ವ ಕರಾವಳಿಯಲ್ಲಿ ಅಗತ್ಯ ಮುನ್ನೆಚ್ಚರಿಕೆಗಳನ್ನು

ತೆಗೆದುಕೊಳ್ಳುವಂತೆ ಎಲ್ಲಾ ರೈಲ್ವೆ ಅಧಿಕಾರಿಗಳಿಗೆ, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ನಿರ್ದೇಶನ ನೀಡಿದ್ದಾರೆ.  ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಚಂಡಮಾರುತ ಸಮಯದಲ್ಲಿ ರೈಲ್ವೆಯ ಸನ್ನದ್ಧತೆಯನ್ನು ಪರಿಶೀಲಿಸಿದ ಸಚಿವರು, ಚಂಡಮಾರುತದ ನಂತರ ರೈಲು ಸೇವೆಗಳನ್ನು ತ್ವರಿತವಾಗಿ ಪುನಃಸ್ಥಾಪಿಸಲು ಮತ್ತು ಹೆಚ್ಚಿನ ಎಚ್ಚರಿಕೆಯನ್ನು ವಹಿಸುವಂತೆ ಎಲ್ಲಾ ರೈಲ್ವೆ ವಲಯಗಳಿಗೆ ಸೂಚನೆ ನೀಡಿದ್ದಾರೆ.

**><><><><><**